ಕರ್ನಾಟಕ ಸರ್ಕಾರ

**ಆಯುಕ್ತರ ಕಛೇರಿ ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ ಬೆಂಗಳೂರು-1**

ಸಂಖ್ಯೆ : ಸಾ.ಸಂ.ವಿ/ಸಾ.ಕುಂ.ಕೊ.ಮ: 01/2018-19 ದಿನಾಂಕ: 18-12-2018

**ಸುತ್ತೋಲೆ**

**ವಿಷಯ:** ಕೇಂದ್ರ ಸರ್ಕಾರ /ಕರ್ನಾಟಕ ಸರ್ಕಾರದ ಇ-ಜನಸ್ಪಂದನ ತಂತ್ರಾಂಶದಲ್ಲಿ ದಾಖಲಾಗಿರುವ ಸಾರ್ವಜನಿಕ ಮನವಿಗಳು/ಸಾರ್ವಜನಿಕ ಕುಂದುಕೊರತೆಯ ಅರ್ಜಿಗಳನ್ನು ನಿಯಮಾನುಸಾರ ನಿಗದಿತ ಅವಧಿಯಲ್ಲಿ ವಿಲೇವಾರಿ ಮಾಡುವ ಬಗ್ಗೆ.

-----------

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ ಸನ್ಮಾನ್ಯ ರಾಷ್ಟ್ರಪತಿಯವರ ಕಛೇರಿ, ಪ್ರಧಾನ ಮಂತ್ರಿಯವರ ಕಾರ್ಯಾಲಯ ಮತ್ತು ಕೇಂದ್ರ ಸರ್ಕಾರದ ವಿವಿಧ ಇಲಾಖೆಗಳಿಂದ ಹಾಗೂ ಕರ್ನಾಟಕ ಸರ್ಕಾರದ ಮಾನ್ಯ ರಾಜ್ಯಪಾಲರ ಕಾರ್ಯಾಲಯ, ಸನ್ಮಾನ್ಯ ಮುಖ್ಯಮಂತ್ರಿಗಳ ಜನತಾ ದರ್ಶನದಲ್ಲಿ ಸ್ವೀಕರಿಸಲ್ಪಡುವ ಮನವಿಗಳು/ಕುಂದುಕೊರತೆಗಳು, ಕರ್ನಾಟಕ ಸರ್ಕಾರದ ಇ-ಜನಸ್ಪಂದನ ಕೋಶದ ಆನ್‌ಲೈನ್ ತಂತ್ರಾಂಶದಲ್ಲಿ ದಾಖಲಾಗುವ ಶಿಕ್ಷಣ ಇಲಾಖೆಗೆ ಸಂಬಂಧಿಸಿದ ಮನವಿಗಳನ್ನು ಸೂಕ್ತ ಕ್ರಮಕ್ಕಾಗಿ ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿಗೆ ಆನ್ ಲೈನ್‌ನಲ್ಲಿ ಸಲ್ಲಿಸಲಾಗುತ್ತಿದೆ.

ಸಲ್ಲಿಸಿದ ಸದರಿ ಅರ್ಜಿಗಳನ್ನು ನಿಯಮಾನುಸಾರ ಕ್ರಮಕ್ಕಾಗಿ ಸ್ವೀಕೃತವಾದ ದಿನವೇ ಟಿಪ್ಪಣಿ ಮೂಲಕ ಈ ಕಛೇರಿಯ ವಿವಿಧ ಶಾಖೆಗಳಿಗೆ ಹಾಗೂ ಅಧೀನ ಕಛೇರಿಗಳಿಗೆ ಕಳುಹಿಸಲಾಗುತ್ತಿದೆ. ನಿಯಮಾನುಸಾರ ಕ್ರಮ ಕೈಗೊಂಡು ಉತ್ತರವನ್ನು ಮನವಿದಾರರಿಗೆ, ಈ ಕಛೇರಿಯ ಸಾರ್ವಜನಿಕ ಸಂಪರ್ಕಾದಿಕಾರಿಗಳಿಗೆ ಮತ್ತು ಇ-ಜನಸ್ಪಂದನ ಕೋಶಕ್ಕೆ ಸಲ್ಲಿಸಲು ಸೂಚಿಸಲಾಗುತ್ತಿದೆ.

ಆದರೆ ಸದರಿ ಅರ್ಜಿಗಳಿಗೆ ಉತ್ತರ ಸಲ್ಲಿಸಲು ಕೆಲವೊಂದು ಶಾಖೆ ಹಾಗೂ ಅಧೀನ ಕಛೇರಿಗಳಿಂದ ವಿಳಂಬ ಮಾಡುತ್ತಿದ್ದು ನಿಗದಿತ ಅವಧಿಯಲ್ಲಿ ಅರ್ಜಿಗಳ ವಿಲೇವಾರಿ ಮಾಡಲು ಸಾಧ್ಯವಾಗುತ್ತಿಲ್ಲ. ಸಂಬಂಧಿಸಿದಂತೆ ಈ ಕಛೇರಿಯಿಂದ ರವಾನೆಯಾಗುವ ನೆನಪೋಲೆಗಳು ಮತ್ತು ದೂರವಾಣಿ ಕರೆಗಳಿಗೂ ಸಂಬಂಧಿಸಿದವರು ಶೀಘ್ರವಾಗಿ ಸ್ಪಂದಿಸುತ್ತಿಲ್ಲ. ಇದರಿಂದ ಇಲಾಖೆಯಲ್ಲಿ ಅವಧಿ ಮೀರಿ ಬಾಕಿ ಉಳಿದ ಪ್ರಕರಣಗಳ ಸಂಖ್ಯೆ ಹೆಚ್ಚಾಗುತ್ತಿದೆ. ಈ ಕೆಳಗಿನ ಅಂಶಗಳನ್ನು ಗಮನಿಸಿ, ಅವುಗಳನ್ನು ಅನುಸರಿಸಿ ಕೂಡಲೇ ಮನವಿಗಳ ವಿಲೇವಾರಿ ಮಾಡುವುದು..

ಪ್ರತಿ ತಿಂಗಳು ಸರ್ಕಾರದ ಹಂತದಲ್ಲಿ ನಡೆಯುವ ಪ್ರಗತಿ ಪರಿಶೀಲನಾ ಸಭೆಯಲ್ಲಿ ಸಾರ್ವಜನಿಕ ಕುಂದುಕೊರತೆ ಮನವಿಗಳ ವಿಲೇವಾರಿ ವಿಷಯವನ್ನು ಅತ್ಯಂತ ಗಂಭೀರವಾಗಿ ಪರಿಗಣಿಸಿದ್ದು, ಯಾವುದೇ ಹಂತದಲ್ಲಿ ವಿಳಂಬಕ್ಕೆ ಅವಕಾಶ ನೀಡದಂತೆ ಕೆಳಕಾಣಿಸಿದ ಸೂಚನೆಗಳನ್ವಯ ತಮ್ಮ ಕಛೇರಿ ವ್ಯಾಪ್ತಿಯ ಮನವಿಗಳನ್ನು ಶೀಘ್ರವಾಗಿ ಇತ್ಯರ್ಥಪಡಿಸಿ ಉತ್ತರವನ್ನು ಸಲ್ಲಿಸುವುದು.

- ಮನವಿಗಳಿಗೆ ಉತ್ತರ ಸಲ್ಲಿಸಲು ನಿಗಧಿಪಡಿಸಿದ ಸಮಯಾವಕಾಶ **ತಂತ್ರಾಂಶದಲ್ಲಿ ದಾಖಲಾದ ದಿನದಿಂದ 30 ದಿನಗಳು** ಮಾತ್ರ
- ಮನವಿಗಳಿಗೆ ಉತ್ತರವನ್ನು ಸಲ್ಲಿಸುವಾಗ ಮೊದಲು ಅರ್ಜಿದಾರರ ವಿಳಾಸಕ್ಕೆ ಉತ್ತರ ಸಲ್ಲಿಸಿ, ಅದರ ಪ್ರತಿಯನ್ನು ಈ ಕಛೇರಿಗೆ ಇ ಮೇಲ್ ಮೂಲಕ ಮತ್ತು ಜನಸ್ಪಂದನ ಕೋಶಕ್ಕೆ ಸಲ್ಲಿಸುವುದು .
- ಉತ್ತರದಲ್ಲಿ **ಮನವಿಯ ಸಂಖ್ಯೆಯನ್ನು** ತಪ್ಪದೇ ನಮೂದಿಸುವುದು
- ಮನವಿಗಳಿಗೆ ಉತ್ತರವನ್ನು ಅಧೀನ ಕಛೇರಿಗಳಿಂದ ಪಡೆಯಬೇಕಾದಲ್ಲಿ ತಕ್ಷಣವೇ ಕ್ರಮ ಕೈಗೊಂಡು , ಮಧ್ಯಂತರ ಪ್ರತಿಕ್ರಿಯೆಯನ್ನು ಮನವಿದಾರರರಿಗೆ ಮತ್ತು ಈ ಕಛೇರಿಗೆ ಸಲ್ಲಿಸುವುದು.

ಪುಟ-02.......

- ಸಾರ್ವಜನಿಕ ಕುಂದುಕೊರತೆಯ ಅರ್ಜಿಗಳ ಬಂದಾಗ ಕೂಡಲೇ ಪರಿಶೀಲಿಸಿ ಸಂಬಂಧಪಟ್ಟವರಿಂದ ಉತ್ತರ ಪಡೆದು ವಿಳಂಬ ಮಾಡದೇ 15 ದಿನದೊಳಗಾಗಿ ಖುದ್ದಾಗಿ ಅಥವಾ ಇ-ಮೇಲ್ ಮೂಲಕ ಉತ್ತರ ಸಲ್ಲಿಸುವುದು.
- ತಮಗೆ ಬಂದ ಕುಂದುಕೊರತೆ ಮನವಿಯು ತಮ್ಮ ವ್ಯಾಪ್ತಿಗೆ ಬರುವುದಿಲ್ಲವೆಂದು ಕಂಡುಬಂದರೆ ಕೂಡಲೇ ಹಿಂದಿರುಗಿಸುವುದು ಅಥವಾ ಸಂಬಂಧಪಟ್ಟ ಕಛೇರಿಗೆ ಕಳುಹಿಸುವುದು.

ಇನ್ನು ಮುಂದೆ ಸಾರ್ವಜನಿಕ ಕುಂದುಕೊರತೆ ಮನವಿಗಳ ವಿಲೇವಾರಿಯಲ್ಲಿ ಯಾವುದೇ ವಿಳಂಬವಾದರೆ ಸಂಬಂಧಿಸಿದ ಶಾಖೆ, ಅಥವಾ ಅಧೀನ ಕಛೇರಿಯ ಮುಖ್ಯಸ್ಥರನ್ನೇ ಹೊಣೆಗಾರರನ್ನಾಗಿ ಮಾಡಲಾಗುವುದು ಎಂಬ ಅಂಶವನ್ನು ಈ ಮೂಲಕ ತಮ್ಮೆಲ್ಲರ ಗಮನಕ್ಕೆ ಸರಲಾಗಿದೆ.

ಸಾರ್ವಜನಿಕ ಕುಂದುಕೊರತೆ ಮನವಿಗಳಿಗೆ ಉತ್ತರವನ್ನು ಇ-ಮೇಲ್ ಮೂಲಕ procpi18@gmail.com ವಿಳಾಸಕ್ಕೆ ಸಲ್ಲಿಸುವುದು.

(ಕೆ.ಬಿ.ಅಂಜನಪ್ಪ)
ಅಪರ ನಿರ್ದೇಶಕರು(ಆಡಳಿತ)
ಸಾರ್ವಜನಿಕ ಶಿಕ್ಷಣ ಇಲಾಖೆ

ಪ್ರತಿಯನ್ನು:-

1. ಮಾನ್ಯ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು, ಇವರಿಗೆ ಗೌರವಪೂರ್ವಕವಾಗಿ ಮಾಹಿತಿಗಾಗಿ ಸಲ್ಲಿಸಿದ.
2. ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಅಭಿಯಾನ , ಬೆಂಗಳೂರು , ಇವರಿಗೆ ಮಾಹಿತಿಗಾಗಿ ಮತ್ತು ಸೂಕ್ತ ಕ್ರಮಕ್ಕಾಗಿ
3. ಅಪರ ಆಯುಕ್ತರು, ಧಾರವಾಡ ಮತ್ತು ಗುಲ್ಬರ್ಗ, ಇವರಿಗೆ ಮಾಹಿತಿಗಾಗಿ ಮತ್ತು ಸೂಕ್ತ ಕ್ರಮಕ್ಕಾಗಿ
4. ನಿರ್ದೇಶಕರು, ಡಿ.ಎಸ್.ಇ.ಆರ್.ಟಿ., ಬೆಂಗಳೂರು, ಇವರಿಗೆ ಮಾಹಿತಿಗಾಗಿ ಮತ್ತು ಸೂಕ್ತ ಕ್ರಮಕ್ಕಾಗಿ
5. ನಿರ್ದೇಶಕರು, ಕ.ಪ್ರೌ.ಶಿ.ಪರೀಕ್ಷಾ ಮಂಡಳಿ, ಬೆಂಗಳೂರು, ಇವರಿಗೆ ಮಾಹಿತಿಗಾಗಿ ಮತ್ತು ಸೂಕ್ತ ಕ್ರಮಕ್ಕಾಗಿ
6. ನಿರ್ದೇಶಕರು, ಭಾಷಾ ಅಲ್ಪಸಂಖ್ಯಾತ ಭಾಷಾ ಶಾಲೆಗಳ ನಿರ್ದೇಶನಾಲಯ, ಇವರಿಗೆ ಮಾಹಿತಿಗಾಗಿ ಮತ್ತು ಸೂಕ್ತ ಕ್ರಮಕ್ಕಾಗಿ
7. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಪಠ್ಯಪುಸ್ತಕ ಸಂಘ, ಬೆಂಗಳೂರು, ಇವರಿಗೆ ಮಾಹಿತಿಗಾಗಿ ಮತ್ತು ಸೂಕ್ತ ಕ್ರಮಕ್ಕಾಗಿ
8. ನಿರ್ದೇಶಕರು, ಸಿಸ್ಲೆಪ್ , ಧಾರವಾಡ, ಇವರಿಗೆ ಮಾಹಿತಿಗಾಗಿ ಮತ್ತು ಸೂಕ್ತ ಕ್ರಮಕ್ಕಾಗಿ
9. ವಿಶೇಷಾಧಿಕಾರಿಗಳು ಹಾಗೂ ವಿಭಾಗೀಯ ಸಹನಿರ್ದೇಶಕರು , ಕೇಂದ್ರೀಕೃತ ದಾಖಲಾತಿ ಘಟಕ, ಬೆಂಗಳೂರು, ಇವರಿಗೆ ಮಾಹಿತಿಗಾಗಿ ಮತ್ತು ಸೂಕ್ತ ಕ್ರಮಕ್ಕಾಗಿ
10. ವಿಭಾಗೀಯ ಸಹನಿರ್ದೇಶಕರು, ಮೈಸೂರು ವಿಭಾಗ/ಬೆಳಗಾಂ ವಿಭಾಗ/ಕಲ್ಬುರ್ಗಿ ವಿಭಾಗ, ಇವರಿಗೆ ಮಾಹಿತಿಗಾಗಿ ಮತ್ತು ಸೂಕ್ತ ಕ್ರಮಕ್ಕಾಗಿ
11. ಸಹನಿರ್ದೇಶಕರು, ಮಧ್ಯಾಹ್ನ ಉಪಹಾರ ಯೋಜನೆ, ಬೆಂಗಳೂರು, ಇವರಿಗೆ ಮಾಹಿತಿಗಾಗಿ ಮತ್ತು ಸೂಕ್ತ ಕ್ರಮಕ್ಕಾಗಿ
12. ಪ್ರಾಂಶುಪಾಲರು, ರಾಜ್ಯದ ಎಲ್ಲಾ ಸಿಟಿಇ ಗಳು, ಇವರಿಗೆ ಮಾಹಿತಿಗಾಗಿ ಮತ್ತು ಸೂಕ್ತ ಕ್ರಮಕ್ಕಾಗಿ
13. ಉಪನಿರ್ದೇಶಕರು (ಟಿಬಿಎಫ್), ಬೆಂಗಳೂರು, ಇವರಿಗೆ ಮಾಹಿತಿಗಾಗಿ ಮತ್ತು ಸೂಕ್ತ ಕ್ರಮಕ್ಕಾಗಿ
14. ಉಪನಿರ್ದೇಶಕರು (ಆಡಳಿತ), ಬೆಂಗಳೂರು/ಮೈಸೂರು/ಕಲ್ಬುರ್ಗಿ/ಬೆಳಗಾಂ ವಿಭಾಗದ ಎಲ್ಲಾ ಜಿಲ್ಲೆಗಳು, ಇವರಿಗೆ ಮಾಹಿತಿಗಾಗಿ ಮತ್ತು ಸೂಕ್ತ ಕ್ರಮಕ್ಕಾಗಿ
15. ಉಪನಿರ್ದೇಶಕರು (ಅಭಿವೃದ್ಧಿ), ಬೆಂಗಳೂರು/ಮೈಸೂರು/ಕಲ್ಬುರ್ಗಿ/ಬೆಳಗಾಂ ವಿಭಾಗದ ಎಲ್ಲಾ ಜಿಲ್ಲೆಗಳು, ಇವರಿಗೆ ಮಾಹಿತಿಗಾಗಿ ಮತ್ತು ಸೂಕ್ತ ಕ್ರಮಕ್ಕಾಗಿ
16. ಎಲ್ಲಾ ಮಾನ್ಯ ಕ್ಷೇತ್ರ ಶಿಕ್ಷಣಾಧಿಕಾರಿಗಳು ಸಾರ್ವಜನಿಕ ಶಿಕ್ಷಣ ಇಲಾಖೆ ಇವರ ಮುಂದಿನ ಕ್ರಮಕ್ಕಾಗಿ
17. ಕಛೇರಿ ಪ್ರತಿ